## ಜೆಎಸ್‌ಎಸ್ ಮಹಾವಿದ್ಯಾಪೀಠ
## ಜಗದ್ಗುರು ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಜ್ಞಾನ ವಾರಿಧಿ–7

### ಡಿಜಿಟಲ್ ಸಾಪ್ತಾಹಿಕ ಉಪನ್ಯಾಸ ಕಾರ್ಯಕ್ರಮ

**18 ಜನವರಿ 2021 * ಸೋಮವಾರ * ಸಂಜೆ 6.00**

ದಿವ್ಯ ಸಾನ್ನಿಧ್ಯ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಸುತ್ತೂರು ಶ್ರೀಕ್ಷೇತ್ರ

ಉಪನ್ಯಾಸ

**ನಿ.ಪ್ರ.ಸ್ವ. ಡಾ. ಶ್ರೀ ಶರತ್‌ಚಂದ್ರ ಸ್ವಾಮಿಗಳು**

ಶ್ರೀ ಕುಂದೂರು ಮಠ, ಮೈಸೂರು

ವಿಷಯ: ಆಧುನಿಕತೆ ಮತ್ತು ಧಾರ್ಮಿಕತೆ–ಸಮನ್ವಯ ದೃಷ್ಟಿ

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP

http://jssonline.org

**ಜ್ಞಾನ ವಾರಿಧಿ** ವಿಶೇಷ ಉಪನ್ಯಾಸ ಮಾಲೆ ಕಾರ್ಯಕ್ರಮವನ್ನು 2020ರ ಡಿಸೆಂಬರ್ ತಿಂಗಳಿನಿಂದ ಪ್ರತಿ ಸೋಮವಾರ ಏರ್ಪಡಿಸಿಕೊಂಡು ಬರಲಾಗುತ್ತಿದೆ. ಕಲೆ, ಸಾಹಿತ್ಯ, ಸಂಸ್ಕೃತಿ, ವಿಜ್ಞಾನ, ತಂತ್ರಜ್ಞಾನ, ಧರ್ಮ, ಅಧ್ಯಾತ್ಮ ಮುಂತಾದ ವಿಷಯಗಳು ಮತ್ತು ಪ್ರಚಲಿತ ವಿದ್ಯಮಾನಗಳನ್ನು ಕುರಿತು ದೇಶ ಮತ್ತು ವಿದೇಶದ ವಿವಿಧ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸಗಳನ್ನು ಆಯೋಜಿಸಲಾಗುತ್ತಿದೆ.

**ಡಾ. ಶ್ರೀ ಶರತ್‌ಚಂದ್ರ ಸ್ವಾಮಿಗಳವರು** ಮೈಸೂರಿನ ಶ್ರೀ ಕುಂದೂರು ಮಠಾಧ್ಯಕ್ಷರು. ಮೈಸೂರು ಮಹಾರಾಜ ಸಂಸ್ಕೃತ ಕಾಲೇಜಿನಲ್ಲಿ ಅಧ್ಯಯನ ಮಾಡಿ, ವೇದಾಂತದಲ್ಲಿ ವಿದ್ವತ್ತನ್ನು, ಮೈಸೂರು ವಿಶ್ವವಿದ್ಯಾನಿಲಯದಿಂದ ಎಂ.ಎ. (ಸಂಸ್ಕೃತ), ಪಿಎಚ್.ಡಿ. ಪದವಿಗಳನ್ನು ಹಾಗೂ ಇಂಗ್ಲಿಷ್ ಮತ್ತು ಹಸ್ತಪ್ರತಿ ಶಾಸ್ತ್ರಗಳಲ್ಲಿ ಸ್ನಾತಕೋತ್ತರ ಡಿಪ್ಲೊಮಗಳನ್ನು ಪಡೆದಿದ್ದಾರೆ. ಸ್ನಾತಕೋತ್ತರ ಪದವಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆಗಾಗಿ ಚಿನ್ನದ ಪದಕಗಳನ್ನು ಗಳಿಸಿದ್ದಾರೆ. ಬಹುಭಾಷಾ ವಿದ್ವಾಂಸರು, ಉತ್ತಮ ವಾಗ್ಮಿಗಳು ಮತ್ತು ಬರಹಗಾರರು.

ಮೈಸೂರು ವಿಶ್ವವಿದ್ಯಾನಿಲಯದ ಪ್ರಾಚ್ಯ ಸಂಶೋಧನಾ ಕೇಂದ್ರದಲ್ಲಿ ಸುಮಾರು ಏಳು ವರ್ಷಗಳ ಕಾಲ ಹಸ್ತಪ್ರತಿ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ, ಪ್ರಸ್ತುತ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವೇದಾಂತ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಮತ್ತು ಸಂಶೋಧನೆ ಹಾಗೂ ಶೈಕ್ಷಣಿಕ ವಿಭಾಗದ ಸಂಯೋಜಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಸಿದ್ಧಾಂತ ಕೌಮುದಿ, ಲಘು ವಿವೃತಿ ವ್ಯಾಖ್ಯೆ, ವೀರಶೈವ-ಲಿಂಗಾಯತ ಮತಗಳು: ಒಂದು ಅವಲೋಕನ, ಬೌದ್ಧ ಧರ್ಮ ದರ್ಶನ, ಅಷ್ಟಾಂಗ ಸಂಗ್ರಹ, ಶೈವ ಸಂಜೀವಿನಿ ಸೇರಿದಂತೆ ಎಂಟಕ್ಕೂ ಹೆಚ್ಚು ಮೌಲಿಕ ಪುಸ್ತಕಗಳನ್ನು ಸಂಪಾದಿಸಿದ್ದಾರೆ.

ಹಲವಾರು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಮ್ಮೇಳನಗಳು ಮತ್ತು ಕಾರ್ಯಾಗಾರಗಳಲ್ಲಿ ವಿದ್ವತ್ಪೂರ್ಣ ಪ್ರಬಂಧಗಳನ್ನು ಮಂಡಿಸಿದ್ದಾರೆ. ಶ್ರೀಗಳ ಬಹುಮುಖ ಪಾಂಡಿತ್ಯವನ್ನು ಗಮನಿಸಿ ಹಲವಾರು ಸಂಘ-ಸಂಸ್ಥೆಗಳು, ಮಠಮಾನ್ಯಗಳು ಗೌರವಿಸಿವೆ.

**ಜ್ಞಾನ ವಾರಿಧಿ-8 * 25 ಜನವರಿ 2021**

**ಡಾ. ಮೈಸೂರು ಎಂ. ಮಂಜುನಾಥ್**

ಅಂತಾರಾಷ್ಟ್ರೀಯ ಖ್ಯಾತಿಯ ವಯೊಲಿನ್ ವಾದಕರು

ವಿಷಯ: ಭಾರತೀಯ ಸಂಗೀತದಲ್ಲಿ ವಯೊಲಿನ್

**ಜ್ಞಾನ ವಾರಿಧಿ-9 * 1 ಫೆಬ್ರವರಿ 2021**

**ಡಾ. ಬಿ. ಗುರುಬಸವರಾಜ್**

ತಜ್ಞ ವೈದ್ಯರು, ಮೈಸೂರು

ವಿಷಯ: ಆರೋಗ್ಯಕರ ಜೀವನ ವಿಧಾನ